**All India Radio: Bangalore**
**Regional Bulletin In Kannada**
**21.11.2024 / 6.40 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**21.11.2024 / 6.40 p.m.**

****************

ಮುಖ್ಯಾಂಶಗಳು

1. ಸರ್ಕಾರಿ ನೌಕರರ, ತೆರಿಗೆ ಪಾವತಿಸುವವರ ಬಿಪಿಎಲ್ ಕಾರ್ಡ್ ರದ್ದು - ಆಹಾರ ಸಚಿವ ಕೆ.ಎಚ್.ಮುನಿಯಪ್ಪ ಸ್ಪಷ್ಟನೆ
2. ಬಿಪಿಎಲ್ ಕಾರ್ಡ್ ರದ್ದು ವಿಚಾರ; ಬಿಜೆಪಿ ನಾಯಕರಿಂದ ಆಕ್ಷೇಪ
3. ನಬಾರ್ಡ್ ಸಾಲದ ಮಿತಿ ಹೆಚ್ಚಿಸುವಂತೆ ದೆಹಲಿಯಲ್ಲಿ ಹಣಕಾಸು ಸಚಿವರಿಗೆ ಮನವಿ ಮಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ
4. ಪರಿಸರದ ಉಳಿವಿಗೆ ವಿವಿಧ ಇಲಾಖೆಗಳ ಸಮನ್ವಯ ಅಗತ್ಯ - ಅರಣ್ಯ ಸಚಿವ ಈಶ್ವರ್ ಖಂಡ್ರೆ
5. ಬೆಂಗಳೂರು ಟೆಕ್ ಶೃಂಗಸಭೆಗೆ ತೆರೆ; ರಸಪ್ರಶ್ನೆಯಲ್ಲಿ ಛತ್ತಿಸ್‌ಗಢದ ತನಿಷ್ ಕುಮಾರ್ ಗೆಲುವು

****************

ಅರ್ಹರ ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡಿಲ್ಲ ಎಂದು ಆಹಾರ ಸಚಿವ ಕೆ.ಎಚ್. ಮುನಿಯಪ್ಪ ಸ್ಪಷ್ಟಪಡಿಸಿದ್ದಾರೆ. ವಿಧಾನಸೌಧದಲ್ಲಿ ಇಂದು ಸುದ್ದಿಗೋಷ್ಠಿ ನಡೆಸಿ, ಮಾತನಾಡಿದ ಅವರು, ಕೇಂದ್ರ ಸರ್ಕಾರದ ಆದೇಶದಂತೆ ನೌಕರರು ಹಾಗೂ ತೆರಿಗೆ ಪಾವತಿ ಮಾಡುವವರನ್ನು ಪರಿಶೀಲಿಸಿದ ಬಳಿಕವೇ ಕಾರ್ಡ್‌ಗಳನ್ನು ಎಪಿಎಲ್‌ಗೆ ಪರಿಷ್ಕರಿಸಲಾಗಿದೆ ಎಂದು ತಿಳಿಸಿದ್ದಾರೆ.

ಮುಂದಿನ ಒಂದು ವಾರದ ಒಳಗೆ ಎಲ್ಲಾ ಸಮಸ್ಯೆಗಳನ್ನು ಬಗೆಹರಿಸಲಾಗುವುದು ಎಂದು ಹೇಳಿದ್ದಾರೆ. ಅರ್ಹ ಕಾರ್ಡ್‌ಗಳನ್ನು ಬಿಪಿಎಲ್ ಕಾರ್ಡ್‌ಗಳಾಗಿ ಪರಿವರ್ತಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

ಒಟ್ಟು ಒಂದು ಲಕ್ಷದ ೨ ಸಾವಿರದ ೫೦೯ ಕಾರ್ಡ್‌ಗಳಲ್ಲಿ ೭೬ ಸಾವಿರದ ೧೭೬ ಕಾರ್ಡ್‌ಗಳನ್ನು ಪರಿಶೀಲಿಸಲಾಗಿದೆ. ಒಟ್ಟು ೬೮ ಸಾವಿರದ ೧೭ ಕಾರ್ಡ್‌ಗಳನ್ನು ಎಪಿಎಲ್‌ಗೆ ಸೇರಿಸಲಾಗಿದೆ. ೧೬ ಸಾವಿರದ ೮೦೬ ಅರ್ಹ ಕಾರ್ಡ್‌ಗಳನ್ನು ಬಿಪಿಎಲ್‌ನಲ್ಲಿ ಮುಂದುವರೆಸಲಾಗಿದೆ ಎಂದು ಮುನಿಯಪ್ಪ ಸ್ಪಷ್ಟಪಡಿಸಿದ್ದಾರೆ.

****************

ಕೇಂದ್ರದ ಮೋದಿ ಸರಕಾರವೇ ಡಿಜಿಟಲೀಕರಣದ ಹೆಸರಿನಲ್ಲಿ ೫ ಕೋಟಿ ೮೦ ಲಕ್ಷ ರೇಷನ್ ಕಾರ್ಡ್ ರದ್ದುಪಡಿಸಿದೆ ಎಂದು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ್ ತಿಳಿಸಿದ್ದಾರೆ.

ಬಿಪಿಎಲ್ ಪಡಿತರ ಚೀಟಿಯು ನಿಜವಾದ ಬಡವರಿಗೆ ಸಿಗಬೇಕು. ಹೀಗಾಗಿ  ರಾಜ್ಯ ಸರ್ಕಾರ ಶ್ರೀಮಂತರು, ತೆರಿಗೆ ಪಾವತಿದಾರರು ಮತ್ತು ಸರಕಾರಿ ಅಧಿಕಾರಿಗಳ ಬಳಿ ಇರುವ ಬಿಪಿಎಲ್ ಕಾರ್ಡುಗಳನ್ನು ರದ್ದುಪಡಿಸುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಸಾಮಾಜಿಕ ಜಾಲತಾಣ  ಈ ಎಕ್ಸ್‌ನಲ್ಲಿ ಈ ಮಾಹಿತಿ ನೀಡಿರುವ ಅವರು,  ರಾಜ್ಯ ಬಿಜೆಪಿಯ ನಾಯಕರಾದ ವಿಜಯೇಂದ್ರ, ಆರ್.ಅಶೋಕ, ಬಸನಗೌಡ ಪಾಟೀಲ ಯತ್ನಾಳ್ ಮತ್ತು ಕೇಂದ್ರ ಸಚಿವರಾದ ಪ್ರಹ್ಲಾದ ಜೋಶಿ ಹಾಗೂ ಶೋಭಾ ಕರಂದ್ಲಾಜೆ ಅವರನ್ನು ಟ್ಯಾಗ್ ಮಾಡಿದ್ದಾರೆ.

****************

ಬಡವರಿಗೆ ನೀಡಲಾಗಿರುವ ಬಿಪಿಎಲ್ ಕಾರ್ಡ್ ಗಳನ್ನು ರದ್ದು ಮಾಡುತ್ತಿರುವ ಸರ್ಕಾರದ ಕ್ರಮವನ್ನು ಪ್ರತಿಪಕ್ಷ ನಾಯಕ ಆರ್.ಅಶೋಕ ಖಂಡಿಸಿದ್ದಾರೆ.

ಬೆಂಗಳೂರಿನ ಜಯನಗರ ವಿಧಾನಸಭಾ ಕ್ಷೇತ್ರದ ಕೆಲವು ಕಾಲೋನಿಗಳಿಗೆ ತೆರಳಿ ಬಿಪಿಎಲ್ ಕಾರ್ಡ್ ರದ್ದುಗೊಂಡಿರುವ ಕೆಲವು ಬಡ ಕುಟುಂಬಗಳ ಮನೆಗಳಿಗೆ ಭೇಟಿ ನೀಡಿ ಸಮಸ್ಯೆ ಆಲಿಸಿದರು.

ಇನ್ನೊಂದೆಡೆ, ಪ್ರತಿಪಕ್ಷ ನಾಯಕ ಆರ್.ವಿಜಯೇಂದ್ರ ಸಾಮಾಜಿಕ ಜಾಲತಾಣದಲ್ಲಿ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಮಾನದಂಡಗಳ ನೆಪವೊಡ್ಡಿ ರಾಜ್ಯದ ೧೧ ಲಕ್ಷಕ್ಕೂ ಅಧಿಕ ಕುಟುಂಬಗಳ ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡಿ, ಅನ್ನಭಾಗ್ಯ ಹಾಗೂ ಗೃಹಲಕ್ಷ್ಮೀ ಹಣಕ್ಕೆ ಕತ್ತರಿ ಹಾಕಲಾಗುತ್ತಿದೆ ಎಂದು ಆರೋಪಿಸಿದ್ದಾರೆ.

ಕಲಬುರಗಿಯಲ್ಲಿಂದು ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ಅರ್ಹ ಬಿಪಿಎಲ್ ಕುಟುಂಬಗಳಿಂದ ಕಾರ್ಡ್ ಗಳನ್ನು ಕಸಿದುಕೊಳ್ಳುವುದು ಸರಿಯಲ್ಲ. ಅನರ್ಹ ಕಾರ್ಡ್ ದಾರರು ಇದ್ದಲ್ಲಿ ಅವರಿಗೆ ನೋಟಿಸ್ ನೀಡಿ, ಸಮಜಾಯಿಷಿ ಪಡೆಯಲು ಅವಕಾಶ ನೀಡಬೇಕು ಎಂದು ತಿಳಿಸಿದ್ದಾರೆ.

****************

ಮುಖ್ಯಮಂತ್ರಿ ಸಿದ್ದರಾಮಯ್ಯ ನವದೆಹಲಿಯಲ್ಲಿಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿಮಾಡಿದ್ದಾರೆ. ಈ ವೇಳೆ ನಬಾರ್ಡ್‌ನಿಂದ ರಾಜ್ಯದ ರೈತರಿಗೆ ಆಗಿರುವ ಸಾಲದ ಕೊರತೆಯನ್ನು ಸರಿಪಡಿಸಿ, ಅನ್ಯಾಯವನ್ನು ಸರಿದೂಗಿಸುವಂತೆ ಮನವಿ ಮಾಡಿದರು.

ನಬಾರ್ಡ್ ಕೃಷಿ ಸಾಲವನ್ನು ಶೇಕಡ ೫೮ರಷ್ಟು ಕಡಿತ ಮಾಡಿರುವುದರಿಂದ ರಾಜ್ಯದ ರೈತರಿಗೆ ಸಂಕಷ್ಟ ಎದುರಾಗಿದೆ. ಹೀಗಾಗಿ ಸಾಲದ ಮಿತಿಯನ್ನು ಹೆಚ್ಚಿಸಿ, ರೈತರ ಹಿತ ಕಾಪಾಡುವಂತೆ ತಿಳಿಸಿದರು.

****************

ದೇಶದ ಹಾಲು ಉತ್ಪಾದನೆಯಲ್ಲಿ ಗುಜರಾತ್ ಮೊದಲ ಸ್ಥಾನದಲ್ಲಿದ್ದರೆ ಕರ್ನಾಟಕ ಎರಡನೇ ಸ್ಥಾನದಲ್ಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ನವದೆಹಲಿಯಲ್ಲಿಂದು ನಂದಿನಿ ವಿವಿಧ ಶ್ರೇಣಿಯ ಹಾಲು ಹಾಗೂ ಅದರ ಉತ್ಪನ್ನ ಬಿಡುಗಡೆ ಮಾಡಿ ಮಾತನಾಡಿದ ಅವರು, ರಾಜ್ಯದಲ್ಲಿ ಪ್ರತಿದಿನ ೯೨ ರಿಂದ ೯೩ ಲಕ್ಷ ಲೀಟರ್ ಹಾಲು ಉತ್ಪಾದನೆಯಾಗುತ್ತಿದೆ ಎಂದು ತಿಳಿಸಿದರು.

ರೈತರಿಂದ ಲೀಟರ್‌ಗೆ ೩೨ ರೂ.ಗಳಿಗೆ ಹಾಲು ಖರೀದಿಸಲಾಗುತ್ತಿದ್ದು, ರಾಜ್ಯ ಸರ್ಕಾರ ಕ್ಷೀರಧಾರೆ ಯೋಜನೆಯಡಿ ಹಾಲು ಉತ್ಪಾದಕರಿಗೆ ಪ್ರತಿ ಲೀಟರಿಗೆ ೫ ರೂ.ಗಳ ಪ್ರೋತ್ಸಾಹಧನವನ್ನು ನೀಡುತ್ತಿದೆ ಎಂದು ಹೇಳಿದರು.

ರಾಜ್ಯದಲ್ಲಿ ಒಟ್ಟು ೧೬ ಹಾಲು ಒಕ್ಕೂಟಗಳಿದ್ದು, ಅಂದಾಜು ೧ ಕೋಟಿ ಲೀಟರ್ ಹಾಲು ಉತ್ಪಾದನೆಯಾಗುತ್ತಿದೆ. ಆರಂಭಿಕ ಹಂತದಲ್ಲಿ ೨.೫ ಲಕ್ಷ ಲೀಟರ್ ಹಾಲು ನವದೆಹಲಿಗೆ ಪೂರೈಸುವ ಯೋಜನೆ ರೂಪಿಸಲಾಗಿದೆ ಎಂದು ಸ್ಪಷ್ಟಪಡಿಸಿದರು.

****************

ಸಮನ್ವಯ, ಸಹಕಾರ ಮತ್ತು ಸಹಯೋಗದಿಂದ ಮಾತ್ರ ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ಬದಲಾವಣೆಯ ಪರಿಣಾಮಗಳನ್ನು ತಗ್ಗಿಸಲು ಸಾಧ್ಯ ಎಂದು ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಪ್ರತಿಪಾದಿಸಿದ್ದಾರೆ.

ಬೆಂಗಳೂರಿನಲ್ಲಿ ನಡೆದ ಪರಿಸರ ಶಿಕ್ಷಣ ಕೇಂದ್ರ, ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆ ಸಹಯೋಗದಲ್ಲಿ ಆಯೋಜಿಸಲಾಗಿರುವ ೨ ದಿನಗಳ ಸಂವಾದಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ಬದಲಾವಣೆ ಇಂದು ವಿಶ್ವಕ್ಕೇ ಸವಾಲಾಗಿದೆ. ಇದರ ಪರಿಣಾಮ ಎದುರಿಸಲು ಮತ್ತು ಪರಿಸರದ ಉಳಿವಿಗಾಗಿ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ನಡುವೆ ಸಮನ್ವಯ ಸಾಧಿಸಲಾಗುವುದು ಎಂದು ತಿಳಿಸಿದ್ದಾರೆ.

****************

ಬೆಂಗಳೂರಿನಲ್ಲಿ ನಡೆದ ಬೆಂಗಳೂರು ಟೆಕ್ ಶೃಂಗಸಭೆಯಲ್ಲಿ ಟಿಸಿಎಸ್ ಎಲೆಕ್ಟ್ರಾನಿಕ್ಸ್, ಐಟಿ, ಬಿಟಿ ಮತ್ತು ವಿಜ್ಞಾನ ಇಲಾಖೆಯ ಸಹಯೋಗದೊಂದಿಗೆ ಗ್ರಾಮೀಣ ಮಕ್ಕಳಲ್ಲಿ ತಂತ್ರಜ್ಞಾನದ ಅರಿವು ಹೆಚ್ಚಿಸಲು ಆಯೋಜಿಸಿದ್ದ ಗ್ರಾಮೀಣ ಐಟಿ ರಸಪ್ರಶ್ನೆಯಲ್ಲಿ ಛತ್ತೀಸ್ ಗಢದ ಬಿಎಸ್‌ಪಿ ಹಿರಿಯ ಮಾಧ್ಯಮಿಕ ಶಾಲೆಯ ತನೀಶ್ ಕುಮಾರ್ ಸಾಹು ಪ್ರಥಮ ಚಾಂಪಿಯನ್ ಆಗಿ ಹೊರಹೊಮ್ಮಿದ್ದಾರೆ, ಈ ಕಾರ್ಯಕ್ರಮವು ೨೧ ಮಿಲಿಯನ್ ವಿದ್ಯಾರ್ಥಿಗಳನ್ನು ತಲುಪಿದ್ದು, ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್‌ನಲ್ಲೂ ದಾಖಲೆಗೊಂಡಿದೆ.

ಬೆಂಗಳೂರು ಟೆಕ್ ಶೃಂಗಸಭೆ(ಬಿಟಿಎಸ್) ೨೦೨೪ ಟೆಕ್ ತಜ್ಞರು, ಶ್ರೀಸಾಮಾನ್ಯರ ಮೆಚ್ಚುಗೆಗೆ ಪಾತ್ರವಾಗಿದ್ದಲ್ಲದೆ, ಭಾರತದ ಅತೀ ದೊಡ್ಡ ಶೃಂಗಸಭೆ ಯಾಗಿ ಹೊಸ ಮೈಲುಗಲ್ಲು ಸೃಷ್ಟಿಸಿದೆ. ಶೃಂಗಸಭೆಯಲ್ಲಿ ೫೧ ದೇಶಗಳು ಮತ್ತು ೫೨೧ ಜಾಗತಿಕ ಸ್ಪೀಕರ್‌ಗಳ ಭಾಗವಹಿಸಿ ಸ್ಟಾರ್ಟ್‌ಅಪ್‌ಗಳ ಅಭಿವೃದ್ಧಿ, ಪಾಲುದಾರಿಕೆ, ಉದ್ಯಮಶೀಲತೆಗೆ 'ದ್ರಬುನಾದಿ ಹಾಕುವ ಮೂಲಕ ಅಭೂತಪೂರ್ವ ಯಶಸ್ಸು ಕಂಡಿದೆ.

ಶೃಂಗಸಭೆಯಲ್ಲಿ ಬಹು ನಿರೀಕ್ಷಿತ ಭಾರತದ ಮೊದಲ ಜಿಸಿಸಿ ನೀತಿಯನ್ನು ಜಾರಿಗೊಳಿಸಲಾಯಿತು. ಬಾಹ್ಯಾಕಾಶ ತಂತ್ರಜ್ಞಾನದ ಪ್ರಗತಿಗಳ ಕುರಿತಂತೆ ಕರ್ನಾಟಕ ಬಾಹ್ಯಾಕಾಶ ತಂತ್ರಜ್ಞಾನ ಕರಡು ನೀತಿಯನ್ನು ಇಸ್ರೋ ಅಧ್ಯಕ್ಷ ಡಾ.ಎಸ್.ಸೋಮನಾಥನ್ ಬಿಡುಗಡೆಗೊಳಿಸಿದರು.

ಈ ಮೂಲಕ ಭಾರತದ ತಂತ್ರಜ್ಞಾನ ರಾಜಧಾನಿಯಾಗಿರುವ ಬೆಂಗಳೂರು, ತಂತ್ರಜ್ಞಾನ ಮತ್ತು ನಾವೀನ್ಯತೆಯ ಭವಿಷ್ಯವನ್ನು ರೂಪಿಸುವಲ್ಲಿ ತನ್ನ ನಾಯಕತ್ವವನ್ನು ಮತ್ತೊಮ್ಮೆ ಸಾಬೀತುಪಡಿಸಿದೆ. ಮೂರು ದಿನಗಳ ಈ ಮೂಲಕ ಟೆಕ್ ಶೃಂಗಸಭೆಗೆ ತೆರೆಬಿದ್ದಿದೆ.

***************

ತುಮಕೂರು ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಮಹಿಳೆ ಕೊಲೆ ಪ್ರಕರಣದಲ್ಲಿ ನ್ಯಾಯಾಲಯ ೨೧ ಆರೋಪಿಗಳಿಗೆ ಜೀವಾವಧಿ ಶಿಕ್ಷೆ, ತಲಾ ೧೩ ಸಾವಿರ ೫೦೦ರೂಪಾಯಿ ದಂಡ ವಿಧಿಸಿ ತೀರ್ಪು ನೀಡಿದೆ.

೨೦೧೦ರಲ್ಲಿ ಚಿಕ್ಕನಾಯಕನಹಳ್ಳಿ ತಾಲ್ಲೂಕು ಹಂದನಕೆರೆ ಹೋಬಳಿಯ ಗೋಪಾಲಪುರ ಗ್ರಾಮದ ಡಾಬಾ ಹೊನ್ನಮ್ಮ ಅವರನ್ನು ಕೊಲೆ ಮಾಡಿದ್ದ ಪ್ರಕರಣದಲ್ಲಿ ೨೭ ಆರೋಪಿಗಳ ಮೇಲೆ ದೌರ್ಜನ್ಯ ಪ್ರಕರಣ ದಾಖಲಾಗಿದ್ದು, ೬ ಆರೋಪಿಗಳು ಸಾವನ್ನಪ್ಪಿದ್ದಾರೆ.

ಉಳಿದ ೨೧ ಆರೋಪಿಗಳ ಅಪರಾಧ ಸಾಬೀತಾದ ಹಿನ್ನೆಲೆಯಲ್ಲಿ ೩ನೇ ಅಧಿಕ ಸತ್ರ ನ್ಯಾಯಾಲಯ ೧೭ ಮಂದಿಗೆ ಜೀವಾವಧಿ ಶಿಕ್ಷೆ ವಿಧಿಸಿ ನ್ಯಾಯಾಧೀಶರಾದ ಎ.ನಾಗಿರೆಡ್ಡಿ ತೀರ್ಪು ನೀಡಿ ಆದೇಶ ನೀಡಿದ್ದಾರೆ.

***************

೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಪ್ರತಿನಿಧಿಯಾಗಿ ನೊಂದಣಿಯಾಗುವ ಪ್ರತಿ ಸದಸ್ಯರಿಗೆ ಮಂಡ್ಯ ಜಿಲ್ಲೆಯ ಸವಿ ನೆನಪಿಗಾಗಿ ಬೆಲ್ಲವನ್ನು ನೀಡಲಾಗುವುದು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ.

ಮಂಡ್ಯದಲ್ಲಿಂದು ಬೆಲ್ಲ ತಯಾರಿಕ ಎಫ್.ಪಿ.ಓ ಘಟಕಗಳ ಸಭೆ ನಡೆಸಿ ಮಾತನಾಡಿದ ಅವರು, ಮಂಡ್ಯ ಜಿಲ್ಲೆಯಲ್ಲಿ ಪ್ರತಿನಿಧಿಗಳಿಗೆ ಬೆಲ್ಲ ನೀಡುವುದರಿಂದ ಬೆಲ್ಲದ ಬಗ್ಗೆ ಹೆಚ್ಚಿನ ಪ್ರಚಾರ ಸಿಗಲಿದೆ ಎಂದು ಹೇಳಿದ್ದಾರೆ.

****************

ಸಂಕ್ಷಿಪ್ತ ಸುದ್ದಿಗಳು

೧. ಪ್ರಧಾನಮಂತ್ರಿ ಆವಾಸ್ ಯೋಜನೆಗೆ ಎಂಟು ವರ್ಷಗಳು ಪೂರ್ಣಗೊಂಡಿದ್ದು, ಪ್ರತಿಯೊಬ್ಬರಿಗೂ ನೆಮ್ಮದಿಯ ಒಂದು ಸೂರು ಕಲ್ಪಿಸಲು, ಬಡ ಜನರ ಕನಸಿನ ಸೂರಿಗೆ ಕೇಂದ್ರ ಸರ್ಕಾರ ಬೆಂಗಾವಲಾಗಿ ನಿಂತಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ.

೨. ರಾಜ್ಯ ಸರ್ಕಾರದ ಪಂಚಗ್ಯಾರಂಟಿಗಳಲ್ಲಿ ಒಂದಾದ ಯುವನಿಧಿ ಯೋಜನೆಯ ನೋಂದಣಿ ಪ್ರಕ್ರಿಯೆಯು ಸೇವಾ ಸಿಂಧೂ ಪೋರ್ಟಲ್ ನಲ್ಲಿ ಚಾಲ್ತಿಯಲ್ಲಿದೆ. ಪದವಿ ತೇರ್ಗಡೆಯಾದ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು ಎಂದು ಕಾರವಾರದ ಉದ್ಯೋಗ ವಿನಿಮಯ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ

೩. ನಾರಾಯಣಪುರ ಅಣೆಕಟ್ಟು ವ್ಯಾಪ್ತಿಯ ಜೆಬಿಸಿ ವೃತ್ತದಡಿ ಬರುವ ಕಾಲುವೆ ಜಾಲಕ್ಕೆ ೨೦೨೪-೨೫ನೇ ಸಾಲಿನ ಹಿಂಗಾರು ಹಂಗಾಮಿಗೆ ಚಾಲೂ ಬಂದ್ ಪದ್ಧತಿ ಅನುಸರಿಸಿ ನೀರನ್ನು ಹರಿಸುವ ವೇಳಾ ಪಟ್ಟಿ ಪ್ರಕಟಿಸಲಾಗಿದೆ ಎಂದು ಯಾದಗಿರಿ ವೃತ್ತ ಕೃಷ್ಣಾ ಭಾಗ್ಯ ಜಲ ನಿಗಮದ ಅಧೀಕ್ಷಕ ಎಂಜಿನಿಯರ್ ಲಕ್ಷ್ಮಣ ಎಂ. ನಾಯಕ ತಿಳಿಸಿದ್ದಾರೆ.

೪. ಬೆಂಗಳೂರು ಗ್ರಾಮಾಂತರ ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಜಿಲ್ಲಾ ಮಟ್ಟದ ಸಾಂಸ್ಕೃತಿಕ ಸ್ಪರ್ಧೆಗಳಿಗೆ ದೊಡ್ಡಬಳ್ಳಾಪುರದಲ್ಲಿ ಚಾಲನೆ ದೊರೆತಿದೆ.

೫. ೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ರಾಜ್ಯದಾದ್ಯಂತ ಸಂಚರಿಸುತ್ತಿರುವ ಕನ್ನಡದ ಜ್ಯೋತಿ ಹೊತ್ತ ಕನ್ನಡ ರಥ ಇಂದು ಚಿಂತಾಮಣಿ ತಾಲೂಕು ಮೂಲಕ ಕೋಲಾರ ತಲುಪಿದೆ.

೬. ಕರ್ನಾಟಕದಲ್ಲಿ ಶೇಕಡ ೨೨.೮ರಷ್ಟು ಜನ ತಂಬಾಕು ಸೇವನೆ ಮಾಡುತ್ತಿದ್ದು, ಪ್ರಪಂಚದಾದ್ಯಂತ ತಂಬಾಕು ಸೇವನೆಯಿಂದ ಪ್ರತಿ ಆರು ಸೆಕೆಂಡಿಗೆ ಒಬ್ಬರಂತೆ ಸಾವನ್ನಪ್ಪುತ್ತಿದ್ದಾರೆ ಎಂದು ವಿಜಯನಗರ ಜಿಲ್ಲಾ ಆರೋಗ್ಯಾಧಿಕಾರಿ ಡಾ. ಜಂಬಯ್ಯ ಕಳವಳ ವ್ಯಕ್ತಪಡಿಸಿದ್ದಾರೆ.

೭. ಬೆಂಗಳೂರು ನಗರ ಜಿಲ್ಲೆಯ ಯುವಜನರಲ್ಲಿ ಶಾಸ್ತ್ರೀಯ ಕಲೆ, ಜನಪದ ಕಲೆ, ಸಂಗೀತ ಮತ್ತು ಸಂಸ್ಕೃತಿಯ ಬಗ್ಗೆ ಪ್ರೋತ್ಸಾಹಿಸಲು ೨೦೨೪-೨೫ನೇ ಸಾಲಿನ “ಯುವಜನೋತ್ಸವ” ಕಾರ್ಯಕ್ರಮವನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ನವೆಂಬರ್ ೨೮ ರಂದು ಆಯೋಜಿಸಲಾಗಿದೆ.

೮. ಕೋಲಾರ ನಗರಸಭೆ ವ್ಯಾಪ್ತಿಯ ವಾರ್ಡ್ ನಂ ೧೬ರಲ್ಲಿ ಸುಮಾರು ೧ ಕೋಟಿ ೪೬ ಲಕ್ಷ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಕೊತ್ತನೂರು ಮಂಜುನಾಥ್ ಚಾಲನೆ ನೀಡಿದರು.

೯. ಬಿಬಿಎಂಪಿ ವ್ಯಾಪ್ತಿಯ ದಾಸರಹಳ್ಳಿ ವಲಯದಲ್ಲಿ ನಾಳೆ ಮುಖ್ಯ ಆಯುಕ್ತ ತುಷಾರ್ ಗಿರಿ ನಾಥ್ ರವರು ಮುಖ್ಯ ಆಯುಕ್ತರ ನಡೆ ವಲಯದ ಕಡೆ ಕಾರ್ಯಕ್ರಮ ನಡೆಸಲಿದ್ದಾರೆ.

೧೦. ರಾಷ್ಟ್ರೀಯ ಗ್ರಂಥಾಲಯ ಸಪ್ತಾಹದ ಅಂಗವಾಗಿ ಉಡುಪಿ ಜಿಲ್ಲಾ ಕೇಂದ್ರ ಗ್ರಂಥಾಲಯ ಹಾಗೂ ಕೌಶಲ್ಯಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಕಾರ್ಕಳ ಶಾಖಾ ಗ್ರಂಥಾಲಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳಿಗೆ ಉಧ್ಯಮಶೀಲತಾ ತರಬೇತಿಯ ಕುರಿತು ಒಂದು ದಿನದ ಕಾರ್ಯಗಾರ ನಡೆಯಿತು.

೧೧. ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ತೋಟದಲ್ಲಿ ಹನಿ ನೀರಾವರಿ ಘಟಕ ಅಳವಡಿಕೆಗೆ ಸಹಾಯಧನ ನೀಡಲು ಕಾರವಾರದಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಸಾಮಾನ್ಯ ವರ್ಗಕ್ಕೆ ಸೇರಿದ ರೈತರು ಸಹಾಯಧನಕ್ಕೆ ಅರ್ಜಿ ಸಲ್ಲಿಸಬಹುದು.

*********ಮುಕ್ತಾಯ*******